# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1972 |
| ಸದಸ್ಯರ ಹೆಸರು | ಶ್ರೀ ಎಸ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.03.2026 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಲುಗಣಿ ಗುತ್ತಿಗೆದಾರರಿಗೆ ಒಟಿಎಸ್ ಸೌಲಭ್ಯ ನೀಡುವ ಕುರಿತು ಸರಕಾರದ ನಿಲುವೇನು; ಇದರಿಂದ ಸರ್ಕಾರಕ್ಕೆ ಎಷ್ಟು ಮೊತ್ತದ ಆದಾಯದ ನಿರೀಕ್ಷೆ ಇದೆ; (ವಿವರ ನೀಡುವುದು); | • ಕಟ್ಟಡ ಕಲ್ಲು ಗಣಿ ಗುತ್ತಿಗೆ / ಲೈಸೆನ್ಸ್ ಪ್ರದೇಶಗಳಲ್ಲಿ ಪರವಾನಗಿ ಪಡೆಯದೆ ಸಾಗಾಣಿಕೆ ಮಾಡಿರುವ ಉಪ ಖನಿಜದ ಪ್ರಮಾಣಕ್ಕೆ ಹಾಗೂ ಗುತ್ತಿಗೆ ಪ್ರದೇಶದ ಹೊರಗಡೆ ಒತ್ತುವರಿ ಮಾಡಿ ಅನಧಿಕೃತವಾಗಿ ಗಣಿಗಾರಿಕೆ ನಡೆಸಿ ಸಾಗಾಣಿಕೆ ಮಾಡಿರುವ ಉಪಖನಿಜದ ಪ್ರಮಾಣಕ್ಕೆ ವಿಧಿಸಿರುವ ದಂಡದ ಮೊತ್ತವನ್ನು One Time Settelment (ಒಟಿಎಸ್) ಮೂಲಕ ಇತ್ಯರ್ಥಪಡಿಸಲು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2025ರ ನಿಯಮ-44-Aಗೆ ತಿದ್ದುಪಡಿಗಳನ್ನು ತರಲಾಗಿದ್ದು, ಸದರಿ ನಿಯಮದ ಅನುಷ್ಠಾನಕ್ಕಾಗಿ ದಿನಾಂಕ: 09.03.2026 ರಿಂದ ಜಾರಿಗೆ ಬರುವಂತೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.<br>• ರಾಜ್ಯ ವ್ಯಾಪ್ತಿಯಲ್ಲಿನ ಕಲ್ಲು ಗಣಿ ಗುತ್ತಿಗೆ ಹಾಗೂ ಒತ್ತುವರಿ ಪ್ರದೇಶಗಳನ್ನು ಗುರುತಿಸಲು ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ (KSRSAC)ದ ಮೂಲಕ Drone/DGPS ಸರ್ವೆ ನಡೆಸಿ **Surface** Plan ಸಿದ್ಧಪಡಿಸಿ Reduced Level ಗಳನ್ನು ಘನೀಕರಿಸುವ ಕಾರ್ಯ ಮುಕ್ತಾಯಗೊಂಡಿದ್ದು, ದತ್ತಾಂಶಗಳ ವಿಶ್ಲೇಷಣೆ ಕಾರ್ಯ ಪ್ರಗತಿಯಲ್ಲಿದೆ. ಸದರಿ ವರದಿಯನುಸಾರ ಒಟಿಎಸ್ ಮೂಲಕ ಸರ್ಕಾರಕ್ಕೆ ಬರುವ ಆದಾಯದ ಪ್ರಮಾಣವನ್ನು ಅಂದಾಜಿಸಲಾಗುತ್ತದೆ.<br>• 2018-19ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ 2145 ಕಲ್ಲುಗಣಿ ಗುತ್ತಿಗೆ ಪ್ರದೇಶಗಳಲ್ಲಿ ಡ್ರೋಣ್ ಸರ್ವೆ ನಡೆಸಲಾಗಿದ್ದು, ಗುತ್ತಿಗೆ ಪ್ರದೇಶಗಳಲ್ಲಿ ಹಾಗೂ ಹೊಂದಿಕೊಂಡಂತೆ ಒತ್ತುವರಿ ಮಾಡಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ತೆಗೆದಿರುವ ಉಪಖನಿಜಕ್ಕೆ ರಾಜಧನದ 5 ಪಟ್ಟು (ರೂ.300/-)ರಂತೆ ಒಟ್ಟು ರೂ.6105.98 ಕೋಟಿ ದಂಡವನ್ನು ಅಂದಾಜಿಸಲಾಗಿತ್ತು.<br>• ಗುತ್ತಿಗೆದಾರರಿಗೆ ನೋಟೀಸ್‌ಗಳನ್ನು ಜಾರಿ ಮಾಡಲಾಗಿತ್ತು. ಸದರಿ ಕ್ರಮವನ್ನು ಪ್ರಶ್ನಿಸಿ ಕೆಲವು ಗುತ್ತಿಗೆದಾರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ಡ್ರೋಣ್ ಸರ್ವೆಯ ಆಧಾರದ ಮೇಲೆ ಪ್ರಮಾಣ ಅಂದಾಜಿಸುವ ಕ್ರಮವನ್ನು ಎತ್ತಿ ಹಿಡಿದಿದ್ದರೂ, ದಂಡ ವಸೂಲು ಮಾಡುವ ಮುನ್ನ ನೋಟೀಸ್ ಜಾರಿ ಮಾಡಿ ಅಹವಾಲು ಸಲ್ಲಿಸಲು ಅವಕಾಶ ನೀಡಬೇಕೆಂದು ನಿರ್ದೇಶಿಸಿದೆ.<br>• ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2025 ರ ನಿಯಮ 44A ಅನ್ವಯ ಕಲ್ಲುಗಣಿ ಗುತ್ತಿಗೆ ಪ್ರದೇಶಗಳಲ್ಲಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ಉತ್ಪಾದಿಸಿ ಸಾಗಾಣಿಕೆ ಮಾಡಿರುವ ಉಪಖನಿಜದ ವ್ಯತ್ಯಾಸದ ಪ್ರತಿ ಮೆಟ್ರಿಕ್ ಟನ್‌ಗೆ ರೂ.70/- ರಂತೆ ಹಾಗೂ ಗಣಿ ಗುತ್ತಿಗೆ / ಲೈಸೆನ್ಸ್ ಪ್ರದೇಶಗಳನ್ನು ಒತ್ತುವರಿ ಮಾಡಿಕೊಂಡು ಸಾಗಾಣಿಕೆ ಮಾಡಿರುವ ಉಪಖನಿಜದ ಪ್ರತಿ ಮೆಟ್ರಿಕ್ ಟನ್‌ಗೆ ರೂ.140/- ರಂತೆ ದಂಡ ಮೊತ್ತವನ್ನು ವಿಧಿಸಿ ವಸೂಲಾತಿಗೆ ಕ್ರಮ ಕೈಗೊಳ್ಳಲು ಅನುಮೋದನೆ ನೀಡಿದ್ದು, ಅದರಂತೆ ಕ್ರಮ ಕೈಗೊಳ್ಳಲಾಗುತ್ತದೆ. |
| ಆ) | ಒಟಿಎಸ್ ಸೌಲಭ್ಯದಿಂದ ಸರ್ಕಾರಕ್ಕೆ 6105 ಕೋಟಿ ನಷ್ಟವಾಗುತ್ತಿರುವ ಬಗ್ಗೆ ಸರ್ಕಾರದ ನಿಲುವೇನು; ಈ ನಷ್ಟಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ; (ವಿವರ ನೀಡುವುದು); | |

| | | |
|---|---|---|
| ಇ) | ಕಳೆದ ಎರಡು ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆ ನಡೆಸಿದ ಸಂಬಂಧ ದಾಖಲಾದ ಪ್ರಕರಣಗಳೆಷ್ಟು; ಈ ರೀತಿ ಅಕ್ರಮ ಕಲ್ಲುಗಣಿಗಾರಿಕೆ ನಡೆಸಿದವರಿಗೂ ಒಟಿಎಸ್ ಸೌಲಭ್ಯ ನೀಡುತ್ತಿರುವ ಬಗ್ಗೆ ಸರ್ಕಾರದ ನಿಲುವೇನು? | • ಕಳೆದ ಎರಡು ವರ್ಷಗಳಲ್ಲಿ ಕಟ್ಟಡ ಕಲ್ಲು ಅಕ್ರಮ ಗಣಿಗಾರಿಕೆ ನಡೆಸಿದ ಸಂಬಂಧ 357 ಪ್ರಕರಣಗಳು ದಾಖಲಾಗಿವೆ.<br><br>• ಕಟ್ಟಡ ಕಲ್ಲು ಗಣಿ ಗುತ್ತಿಗೆದಾರರು / ಲೈಸೆನ್ಸ್‌ದಾರರಿಗೆ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ಉತ್ಪಾದಿಸಿ ಸಾಗಾಣಿಕೆ ಮಾಡಿರುವ ಮತ್ತು ಗಣಿ ಗುತ್ತಿಗೆ ಪ್ರದೇಶದ ಹೊರಗಡೆ ಒತ್ತುವರಿ ಮಾಡಿಕೊಂಡು ಸಾಗಾಣಿಕೆ ಮಾಡಿರುವ ಪ್ರಕರಣಗಳಿಗೆ ಮಾತ್ರ One Time Settelment (ಒಟಿಎಸ್) ಸೌಲಭ್ಯ ಅನ್ವಯವಾಗುತ್ತದೆ.<br>• ಇತರೆ ಅನಧಿಕೃತ ಗಣಿಗಾರಿಕೆ ನಡೆಸಿದವರಿಗೆ One Time Settelment (ಒಟಿಎಸ್) ಸೌಲಭ್ಯ ಅನ್ವಯವಾಗುವುದಿಲ್ಲ. |

ಸಂಖ್ಯೆ:ಸಿಐ-ಎಂಎಂಎನ್/139/2026

(ಸಹಿ)

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.